**ದಿನಾಂಕ: 10.08.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆ : ಅರ್ಜಿದಾರ ಪರ ಶ್ರೀ.ಆರ್ ಯು ಪಿ ವಕೀಲರಿಂದ

ನಾನು ಈ ಅರ್ಜಿಯಲ್ಲಿ ಅರ್ಜಿದಾರನಾಗಿದ್ದು ನನ್ನ ಮುಖ್ಯ ವಿಚಾರಣೆಯ ಹೇಳಿಕೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದ ವಿಷಯಗಳು ನನಗೆ ತಿಳಿದಿವೆ ಮತ್ತು ಸತ್ಯವಾಗಿವೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಇರುತ್ತದೆ. ನನ್ನ ಪರವಾಗಿ ಹಾಜರುಪಡಿಸಿದ ದಾಖಲೆಗಳನ್ನು ನಿಶಾನಿಸಬೇಕೆಂದು ಕೇಳಿಕೊಳ್ಳುತ್ತೇನೆ.

| | |
|---|---|
| ನಿ ಪಿ 1 | ಪೋಲಿಸ್ ದೂರು |
| ನಿ ಪಿ 2 | ಪ್ರ.ವ.ವರದಿ |
| ನಿ ಪಿ 3 | ಸ್ಥಳ ಪಂಚನಾಮೆ |
| ನಿ ಪಿ 4 | ಕಚ್ಚಾನಕ್ಷೆ |
| ನಿ ಪಿ 5 | ಗಾಯದ ಪ್ರಮಾಣಪತ್ರ |
| ನಿ ಪಿ 6 | ಎಂ ವಿ ಐ ವರದಿ |
| ನಿ ಪಿ 7 | ಅಂತಿಮ ವರದಿ |
| ನಿ ಪಿ 8 | ನನ್ನ ಆಧಾರಕಾರ್ಡನ ನೋಟರಿ ಪ್ರತಿಯನ್ನು ಮೂಲ ಪ್ರತಿ ನೋಡಿ ಗುರುತಿಸಿ ಮೂಲ ಪ್ರತಿಯನ್ನು ಅರ್ಜಿದಾರರಿಗೆ ಸೂಕ್ತ ಹಿಂಬರಹದೊಂದಿಗೆ ಮರಳಿಸಲಾಯಿತು. |
| ನಿ ಪಿ 9 | ಶಿವಮೊಗ್ಗ ಆಸ್ಪತ್ರೆಯ ಬಿಡುಗಡೆ ಪ್ರಮಾಣಪತ್ರ |

ನನ್ನ ಅರ್ಜಿಯಲ್ಲಿ ಕೋರಿದಂತೆ ಅರ್ಜಿಯನ್ನು ಪುರಸ್ಕರಿಸಲು ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ 3 ನೇ ಎದುರುದಾರ ಪರ ಶ್ರೀ ಎ ಎಸ್ ಪಿ ವಕೀಲರಿಂದಃ**

ಅಪಘಾತ ಸಮಯದಲ್ಲಿ ನನಗೆ 40 ವರ್ಷ ವಯಸ್ಸಾಗಿತ್ತು ಎಂದರೆ ಸರಿಯಲ್ಲ. ಆಗ ಓಮಿನಿಯಲ್ಲಿ ಸುಮಾರು 6 ಜನ ಪ್ರಯಾಣಿಸುತ್ತಿದ್ದರು. ಆಗ ಸದರಿ ವಾಹನದಲ್ಲಿ ಒಟ್ಟು 10 ಜನ ಪ್ರಯಾಣಿಸುತ್ತಿದ್ದೆವು ಎಂದರೆ ಸರಿಯಲ್ಲ. ಆಗ ಚಾಲಕನ ಅಕ್ಕಪಕ್ಕದಲ್ಲಿ ಸುಮಾರು ಜನ

ಕೂತಿದ್ದರಿಂದ ಚಾಲಕನೇ ಆಯತಪ್ಪಿ ಬ್ರಿಡ್ಜಗೆ ಹೊಡೆದು ಅಪಘಾತ ಮಾಡಿದ್ದಾನೆ ಎಂದರೆ ಸರಿಯಲ್ಲ. ಓಮಿನಿ ವಾಹನದ ಚಾಲಕನ ಚಾಲನಾ ಪತ್ರ ಮತ್ತು ವಾಹನದ ಪರ್ಮಿಟ ಇದ್ದಿರಲಿಲ್ಲ ಎಂದರೆ ಸರಿಯಲ್ಲ. ಅಪಘಾತದ ದಿನದಂದೇ ದೂರನ್ನು ಕೊಟ್ಟಿಲ್ಲ. ಅಪಘಾತವಾದ ತಕ್ಷಣ ಶಿವಮೊಗ್ಗದ ಸರಕಾರಿ ಆಸ್ಪತ್ರೆಗೆ ಹೋದೆನು. ಆಗ ನನಗೆ ಏನೇನು ಚಿಕಿತ್ಸೆ ಮಾಡಿದ್ದರು ಎಂಬುದು ನನಗೆ ಗೊತ್ತಿಲ್ಲ ಏಕೆಂದರೆ ಆಗ ನನಗೆ ಪ್ರಜ್ಞೆ ತಪ್ಪಿತ್ತು. ನಾನು ಯಾವುದೇ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. ಶಿವಮೊಗ್ಗದ ಆಸ್ಪತ್ರೆಗೆ ದಾಖಲಾದ ಬಗ್ಗೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ಆದ ಗಾಯಗಳಿಗೆ ನಾನು ಯಾವುದೇ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. ಸದರಿ ಗಾಯದಿಂದ ನನಗೆ ಯಾವುದೇ ಶಾಶ್ವತ ಅಂಗನ್ಯೂನ್ಯತೆ ಉಂಟಾಗಿಲ್ಲ ಎಂದರೆ ಸರಿಯಲ್ಲ.

ನಾನು ಅಪಘಾತಕ್ಕೂ ಮುಂಚೆ ವ್ಯಾಪಾರದಿಂದ ಪ್ರತಿಮಾಹೆ 20 ಸಾವಿರ ಗಳಿಸುತ್ತಿದ್ದೆ ಅಂತಾ ಆ ಬಗ್ಗೆ ಯಾವುದೇ ದಾಖಲೆ ಕೊಟ್ಟಿಲ್ಲ ಎಂದರೆ ಸರಿಯಲ್ಲ. ಶಿವಮೊಗ್ಗ ಆಸ್ಪತ್ರೆ ಹೊರತುಪಡಿಸಿ ಮಂಗಳೂರು ಆಸ್ಪತ್ರೆಯಲ್ಲಿ ತೋರಿಸಿದ್ದೇನೆ. ನನ್ನ ಮುಖ್ಯ ಅರ್ಜಿ ಕಾಲಮಿತಿಯಲ್ಲಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಈಗ ಸಂಪೂರ್ಣ ಗುಣಮುಖ ಹೊಂದಿದ್ದು ಮುಂಚಿನಂತೆ ಎಲ್ಲಾ ಕೆಲಸಗಳನ್ನು ಮಾಡಬಲ್ಲೆ ಎಂದರೆ ಸರಿಯಲ್ಲ. ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಆಗಿಲ್ಲ ಎಂದರೆ ಸರಿಯಲ್ಲ. ನನಗೆ ಯಾವುದೇ ಶಾಶ್ವತ ಅಂಗನ್ಯೂನ್ಯತೆ ಆಗದೇ ಇದ್ದದ್ದರಿಂದ ನಾನು ಅರ್ಜಿಯಲ್ಲಿ ಕೇಳಿದ ಪರಿಹಾರಕ್ಕೆ ಅರ್ಹನಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರನು ವಾಹನದ ವಿಮಾ ಷರತ್ತುಗಳನ್ನು ಉಲ್ಲಂಘನೆ ಮಾಡಿದ್ದರಿಂದ ನಾನು ಕೇಳಿದ ಪರಿಹಾರಕ್ಕೆ 2 ನೇ ಎದುರುದಾರ ಬಾಧ್ಯಸ್ಥ ಅಲ್ಲ ಎಂದರೆ ಸರಿಯಲ್ಲ. ನಿಪಿ-9 ನ್ನು ಈ ಕೇಸಿನಲ್ಲಿ ಸೃಷ್ಟಿ ಮಾಡಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ನೇ ಎದುರುದಾರ ಪರ ಶ್ರೀಮತಿ ಎಸ್ ಎಸ್ ಕೆ ವಕೀಲರಿಂದಃ**

ಸದರಿ ಆಪಾದಿತ ವಾಹನ 3 ನೇ ಎದುರುದಾರ ಬಳಿ ವಿಮಾಗೊಂಡಿತ್ತು ಎಂದರೆ ನಿಜ. 2 ನೇ ಎದುರುದಾರನು ಸದರಿ ವಿಮಾ ಷರತ್ತುಗಳನ್ನು ಉಲ್ಲಂಘಿಸಿರುವುದಿಲ್ಲ ನನಗೆ ಗೊತ್ತಿಲ್ಲ. ಆದ್ದರಿಂದ ನಾನು ಕೇಳಿದ ಪರಿಹಾರಕ್ಕೆ 3 ನೇ ಎದುರುದಾರ ಬಾಧ್ಯಸ್ಥ ಎಂದರೆ ನನಗೆ ಗೊತ್ತಿಲ್ಲ. ನನಗೆ ಯಾವುದೇ ಅಂಗನ್ಯೂನ್ಯತೆ ಆಗದೇ ಇದ್ದರೂ ಕೂಡಾ ಹೆಚ್ಚಿನ ಪರಿಹಾರ ಪಡೆಯುವ ದುರುದ್ದೇಶದಿಂದ ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

: ಮರುವಿಚಾರಣೆ : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

(ಶ್ರೀ. ಮಹೇಶ ಎಸ್. ಪಾಟೀಲ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ ಹಾನಗಲ್

( ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ಎದುರುದಾರರು ಹಾಗೂ ಅವರ ವಕೀಲರನ್ನು ಕರೆಯಲಾಯಿತು, ಗೈರು ಹಾಜರಿ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು)

2 ನೇ ಎದುರುದಾರರು ಏಕಪಕ್ಷೀಯವಾಗಿರುವ ಕಾರಣ ಪಾಟೀ ಸವಾಲು ಇಲ್ಲ ಅಂತಾ ತೆಗೆದುಕೊಳ್ಳಲಾಯಿತು.

(ಅರ್ಜಿದಾರ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ನೀಡಲಾಗಿದೆ)

**(**ಎದುರುದಾರರು ಮತ್ತು ಅವರ ವಕೀಲರನ್ನು ಕರೆಯಲಾಯಿತು. ಗೈರು ಹಾಜರು, ತಕರಾರು ಸಲ್ಲಿಸಿರುವುದಿಲ್ಲ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**)**